# ಕರ್ನಾಟಕ ವಿಧಾನ ಪರಿಷತ್ತು
## ನೂರ ಮೂವತ್ತನೆಯ ಅಧಿವೇಶನ
## ಕಾರ್ಯಕಲಾಪಗಳ ಪಟ್ಟಿ
**ಶುಕ್ರವಾರ, ದಿನಾಂಕ: 04ನೇ ಮಾರ್ಚ್, 2016**
**(ಸಮಯ: ಬೆಳಗ್ಗೆ 10.00 ಗಂಟೆಗೆ)**

******

### 01. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಶ್ರೀ ಸಿದ್ದರಾಮಯ್ಯ** (ಮುಖ್ಯಮಂತ್ರಿಗಳು) ಅವರು:-

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ ಮಾರ್ಚ್ 2015ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಆರ್ಥಿಕ ವಲಯ (ಸಂಖ್ಯೆ: 2) ಮತ್ತು ರಾಜಸ್ವ ವಿಭಾಗ ಮೇಲಿನ ವರದಿ (ಸಂಖ್ಯೆ: 3)ಗಳನ್ನು ಸಭೆಯ ಮುಂದಿಡುವುದು.

### 02. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2016ನೇ ಫೆಬ್ರವರಿ, 29ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ: 03.03.2016ರಂದು ಡಾ: ಮತ್ತಿಕಟ್ಟಿ ವೀರಣ್ಣರವರು ಸೂಚಿಸಿದ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ:

(ಎರಡನೇ ದಿನ)

### 03. ಪ್ರಶ್ನೋತ್ತರ

| | | | |
|---|---|---|---|
| ಅ. | **ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು** | : | **ನಾಲ್ಕನೆಯ ಪಟ್ಟಿ** |
| ಆ. | **ತಡೆಹಿಡಿಯಲಾದ ಪ್ರಶ್ನೆಗಳು:**<br>1) 3ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಕೋಟ ಶ್ರೀನಿವಾಸ ಪೂಜಾರಿ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 34(186)<br>2) 3ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ವಿ.ಎಸ್. ಉಗ್ರಪ್ಪ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 36(347)<br>3) 3ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಟಿ.ಎ. ಶರವಣ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 37(205)<br>4) 3ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 40(283)<br>5) 3ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ರಾಮಚಂದ್ರಗೌಡ ಮತ್ತು ಶ್ರೀ ಎಂ. ಶ್ರೀನಿವಾಸ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 41(194+59) | | **ಮಾನ್ಯ ಗೃಹ ಸಚಿವರು** |
| ಇ. | **ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು** | : | **ನಾಲ್ಕನೆಯ ಪಟ್ಟಿ** |

## 04. ವರದಿಯನ್ನೊಪ್ಪಿಸುವುದು

**ಶ್ರೀ ಮರಿತಿಬ್ಬೇಗೌಡ (ಮಾನ್ಯ ಉಪಸಭಾಪತಿಗಳು ಹಾಗೂ ಅಧ್ಯಕ್ಷರು, ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿ)** ಅವರು ಖಾಸಗಿ ಸದಸ್ಯರುಗಳ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿಯ ಮೊದಲನೆಯ ವರದಿಯನ್ನು ಒಪ್ಪಿಸುವುದು.

## ೦5. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀ ಐವನ್ ಡಿ'ಸೋಜಾ** ಅವರು ಮೂಲ ಗೇಣಿದಾರರಿಗೆ ಮಾಲಿ ಹಕ್ಕು ನೀಡುವ ಬಗ್ಗೆ ರಾಜ್ಯ ಸರ್ಕಾರವು ಕಾನೂನು ರಚಿಸಿದ್ದರೂ ಈ ಬಗ್ಗೆ ನಿಯಮಗಳನ್ನು ರಚಿಸದೇ ಮೂಲ ಗೇಣಿದಾರರು ಸಂಕಷ್ಟಕ್ಕೆ ಸಿಲುಕಿರುವ ಬಗ್ಗೆ **ಮಾನ್ಯ ಕಂದಾಯ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀ ರಾಮಚಂದ್ರ ಗೌಡ** ಅವರು ಆರ್ಥಿಕವಾಗಿ ಅತ್ಯಂತ ಕಷ್ಟದ ಪರಿಸ್ಥಿತಿಯಲ್ಲಿರುವ ನೇಕಾರ ಜನಾಂಗದ ಸಮೂಹವನ್ನು ಎಲ್ಲಾ ಸ್ಥರಗಳಲ್ಲಿಯೂ ಮೇಲೆತ್ತುವ ಕುರಿತು **ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ** ಗಮನ ಸೆಳೆಯುವುದು.

**ಇ) ಶ್ರೀ ಪುಟ್ಟಣ್ಣ** ಅವರು ರಾಜ್ಯದ ಅನುದಾನಿತ ಹಾಗೂ ಅನುದಾನರಹಿತ ಪ್ರಾಥಮಿಕ, ಪ್ರೌಢ ಶಾಲೆಗಳು ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಕೆಲಸ ಮಾಡುವ ಅಧ್ಯಾಪಕರು ವೈದ್ಯಕೀಯ ಭತ್ಯೆಯ ಸವಲತ್ತಿನಿಂದ ವಂಚಿತರಾಗಿರುವ ಬಗ್ಗೆ **ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ** ಗಮನ ಸೆಳೆಯುವುದು.

## ೦6. ನಿಯಮ ೩೩೦ರ ಮೇರೆಗೆ

**ಅ) ಕ್ಯಾಪ್ಟನ್ ಗಣೇಶ್ ಕಾರ್ಣಿಕ್** ಅವರು ದಕ್ಷಿಣ ಕನ್ನಡ ಜಿಲ್ಲೆಯ ಜೀವ ನದಿಗಳಾದ ನೇತ್ರಾವತಿ ಹಾಗೂ ಕುಮಾರಧಾರ ನದಿಯ ಉಪನದಿಯಾದ ಎತ್ತಿನ ಹೊಳೆಯ ನೀರನ್ನು ಚಿಕ್ಕಬಳ್ಳಾಪುರ, ಕೋಲಾರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಗೆ ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸುವುದಕ್ಕಾಗಿ ಕೈಗೆತ್ತಿಕೊಂಡಿರುವ "ಎತ್ತಿನ ಹೊಳೆ" ಯೋಜನೆಯು ಅವೈಜ್ಞಾನಿಕವಾಗಿದ್ದು, ಇದರಿಂದಾಗಿ ಪರಿಸರದ ಮೇಲಾಗುವ ಪರಿಣಾಮಗಳು ಹಾಗೂ ಈ ಯೋಜನೆಯ ಟೆಂಡರ್ ಪ್ರಕ್ರಿಯೆಯಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು)**

**ಆ) ಶ್ರೀ ವಿ.ಎಸ್. ಉಗ್ರಪ್ಪ** ಅವರು ರಾಜ್ಯದಲ್ಲಿ ಸೋಲಾರ್ ವಿದ್ಯುಚ್ಛಕ್ತಿ ಉತ್ಪಾದನೆ ಮಾಡಲು ಇರುವ ಸಾಧಕ-ಬಾಧಕಗಳ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಇಂಧನ ಸಚಿವರು)**

## ೦7. ಖಾಸಗಿ ಸದಸ್ಯರ ಕಾರ್ಯಕಲಾಪಗಳು

<u>ಖಾಸಗಿ ಸದಸ್ಯರ ನಿರ್ಣಯ</u>

ಮಾನ್ಯ ಸದಸ್ಯರಾದ ಶ್ರೀ ಸಿ.ಹೆಚ್. ವಿಜಯಶಂಕರ್ ಅವರು ದಿನಾಂಕ: 10.07.2015ರಂದು "ಕರ್ನಾಟಕ ವೃಕ್ಷ (ಮರ) ಸಂರಕ್ಷಣಾ ಕಾಯ್ದೆ (ಅಧಿನಿಯಮ) 1976ನ್ನು ಮತ್ತಷ್ಟು ತಿದ್ದುಪಡಿ ಮಾಡುವುದಕ್ಕಾಗಿ" ಮಂಡಿಸಿದ್ದ ಖಾಸಗಿ ನಿರ್ಣಯವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**ವಿ. ಶ್ರೀಶ್**
**ಕಾರ್ಯದರ್ಶಿ**

---